# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1851+1754 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ<br>(ವಿಧಾನಸಭೆಯಿಂದ ಚುನಾಯಿತರಾದವರು) ಮತ್ತು<br>ಶ್ರೀ ಟಿ.ಎನ್ ಜವರಾಯಿ ಗೌಡ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 23.03.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 16 ವರ್ಷದೊಳಗಿನ ಶಾಲಾ ವಿದ್ಯಾರ್ಥಿಗಳಿಗೆ ಸಾಮಾಜಿಕ ಜಾಲತಾಣಗಳನ್ನು ಸಂಪೂರ್ಣವಾಗಿ ನಿಷೇಧಿಸುವ ಮತ್ತು ಮೊಬೈಲ್ ಬಳಕೆಯನ್ನು ಸಂಪೂರ್ಣವಾಗಿ ಇಲ್ಲವೇ ಗಣನೀಯ ಮಟ್ಟದಲ್ಲಿ ತಡೆಯುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಮೊಬೈಲ್ ಬಳಕೆ ಮಕ್ಕಳನ್ನು ಅತ್ಯಂತ ಆಘಾತಕಾರಿ ಅಪಾಯಗಳಿಗೆ ಒಡ್ಡುತ್ತಿದ್ದು ಅವರನ್ನು ಮಾನಸಿಕ ಕ್ಷೋಭೆಗೆ ಕೂಡ ದೂಡುತ್ತಿದ್ದು ಇದಕ್ಕೆ ಕಡಿವಾಣ ಹಾಕಲು ಸರ್ಕಾರ ಸೂಕ್ತ ಕ್ರಮ ವಹಿಸುವುದೇ; | • ಸರ್ಕಾರದ ಆದೇಶ ಸಂಖ್ಯೆ: ಇಡಿ 226 ಎಲ್ ಐ ಟಿ 2007, ದಿನಾಂಕ: 05.10.2007ರಲ್ಲಿ 1ನೇ ತರಗತಿಯಿಂದ 12ನೇ ತರಗತಿಯವರೆಗೆ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಅನ್ವಯಿಸುವಂತೆ ಶಾಲಾವಧಿಯಲ್ಲಿ ಮೊಬೈಲ್ ಅನ್ನು ಶಾಲಾ ಕಾಲೇಜುಗಳ ಆವರಣದಲ್ಲಿ ಉಪಯೋಗಿಸುವುದನ್ನು ನಿಷೇದಿಸಲಾಗಿದೆ.<br><br>• ದಿನಾಂಕ: 05.10.2007ರ ಆದೇಶದನ್ವಯ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆಯ ಸುತ್ತೋಲೆ ಸಂಖ್ಯೆ: ಎಡಿಎಂ 2(4) ಕಾ.ಬಾ.ಚ.01/2023-24, ದಿನಾಂಕ: 26.07.2023 ರಲ್ಲಿ ಕಾನೂನು ಬಾಹಿರ ಚಟುವಟಿಕೆಗಳ ಸಂಬಂಧ ಶಾಲಾ ಕಾಲೇಜುಗಳಲ್ಲಿ ಪಾಲಿಸಬೇಕಾದ ಕಾರ್ಯಗಳ ಕುರಿತು ಮತ್ತು ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ ಹಾಗೂ ಅನುದಾನ ರಹಿತ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಶಾಲಾವಧಿಯಲ್ಲಿ ಶಾಲಾ / ಕಾಲೇಜುಗಳ ಆವರಣದಲ್ಲಿ ಮೊಬೈಲ್ ಬಳಕೆಯನ್ನು ನಿಷೇಧಿಸುವಂತೆ ರಾಜ್ಯದ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರನ್ನೊಳಗೊಂಡಂತೆ ಶಿಕ್ಷಣ ಇಲಾಖೆಯ ಎಲ್ಲಾ ಸಕ್ಷಮ ಪ್ರಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. |

| | | |
|---|---|---|
| | | • ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳಲ್ಲಿ ಅತಿಯಾದ ಹಾಗೂ ಅನಿಯಂತ್ರಿತ ಮೊಬೈಲ್ ಫೋನ್‌ಗಳು ಹಾಗೂ ಇತರ ಡಿಜಿಟಲ್ ಸಾಧನಗಳ ಬಳಕೆಯಿಂದಾಗಿ ಓದುವಿಕೆಯಲ್ಲಿ ಗಣನೀಯ ಕುಸಿತ ಉಂಟಾಗುತ್ತಿರುವುದು ಕಂಡು ಬರುತ್ತಿರುವುದು ಸೇರಿದಂತೆ ಓದಿನಲ್ಲಿ ಆಸಕ್ತಿ ಕುಂಠಿತವಾಗುತ್ತಿರುವುದು, ಏಕಾಗ್ರತೆ ಹಿನ್ನಡೆಯಾಗುತ್ತಿರುವುದು ಮತ್ತು ಮಾನಸಿಕ ಆರೋಗ್ಯದ ಮೇಲೆ ಪ್ರತಿಕೂಲ ಪರಿಣಾಮಗಳು ಉಂಟಾಗುತ್ತಿರುವುದು ಕೂಡ ಕಂಡು ಬಂದಿರುತ್ತದೆ.<br><br>• ರಾಜ್ಯದಲ್ಲಿ 16 ವರ್ಷದೊಳಗಿನ ಶಾಲಾ ವಿದ್ಯಾರ್ಥಿಗಳಿಗೆ ಸಾಮಾಜಿಕ ಜಾಲತಾಣಗಳನ್ನು ಸಂಪೂರ್ಣವಾಗಿ ನಿಷೇಧಿಸುವ ಹಾಗೂ ಮೊಬೈಲ್ ಬಳಕೆಯನ್ನು ನಿಯಂತ್ರಿಸಿ, ಓದುವ ಅಭ್ಯಾಸವನ್ನು ಪುನಶ್ಚೇತನಗೊಳಿಸುವ ಮೂಲಕ ಜ್ಞಾನಸಮೃದ್ಧಿಗೆ ಪೂರಕವಾದ ಕಲಿಕಾ ವಾತಾವರಣವನ್ನು ನಿರ್ಮಿಸಿ, ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಾಸವನ್ನು ಸಾಧಿಸುವ ಉದ್ದೇಶದಿಂದ "ಮೊಬೈಲ್ ಬಿಡಿ-ಪುಸ್ತಕ ಹಿಡಿ" ಅಭಿಯಾನವನ್ನು ರಾಜ್ಯದಾದ್ಯಂತ ಹಮ್ಮಿಕೊಳ್ಳಲು ಉದ್ದೇಶಿಸಿ, ಸರ್ಕಾರದ ಸುತ್ತೋಲೆ ಸಂಖ್ಯೆ: ಇಪಿ 375 ಪಿಜಿಸಿ 2025, ದಿನಾಂಕ: 28.01.2026 ರಲ್ಲಿ ಎಲ್ಲಾ ಶಾಲಾ ಹಂತದಲ್ಲಿ ಅನುಷ್ಠಾನಗೊಳಿಸಲು ಸೂಚನೆಗಳನ್ನು ನೀಡಲಾಗಿರುತ್ತದೆ. ಇದರ ಮೂಲಕ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಮೊಬೈಲ್ ಬಳಕೆಯ ದುಷ್ಪರಿಣಾಮಗಳ ಕುರಿತು ಸಹ ಅರಿವು ಮೂಡಿಸಲಾಗುತ್ತಿದೆ.<br><br>• 2026-27ನೇ ಸಾಲಿನ ಆಯವ್ಯಯ ಭಾಷಣದಲ್ಲಿ, "ಹೆಚ್ಚುತ್ತಿರುವ ಮೊಬೈಲ್ ಬಳಕೆಯಿಂದ ಮಕ್ಕಳ ಮೇಲೆ ಬೀರುವ ಅಡ್ಡ ಪರಿಣಾಮಗಳನ್ನು ತಡೆಗಟ್ಟುವ ಉದ್ದೇಶದಿಂದ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣದ ಬಳಕೆಯನ್ನು ನಿಷೇಧಿಸಲಾಗುವುದು" ಎಂದು ಘೋಷಿಸಲಾಗಿದೆ. ಅದರನ್ವಯ ತಜ್ಞರ ಸಮಿತಿಗಳನ್ನು ರಚನೆ ಮಾಡಿ ಕ್ರಮವಹಿಸಲಾಗುವುದು. |

| | | |
|---|---|---|
| | | • ಮೊಬೈಲ್ ಬಳಕೆಯಿಂದ ಮಕ್ಕಳಿಗೆ ಉಂಟಾಗುವ ಅಪಾಯಗಳು ಮತ್ತು ಮಾನಸಿಕ ಒತ್ತಡವನ್ನು ಗಮನದಲ್ಲಿಟ್ಟುಕೊಂಡು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಈ ಯೋಜನೆಯ ಮೂಲಕ ಹದಿಹರೆಯದ ವಿದ್ಯಾರ್ಥಿಗಳಲ್ಲಿ ಜೀವನ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವುದು ಹಾಗೂ ಮಾನಸಿಕ ಒತ್ತಡವನ್ನು ನಿಭಾಯಿಸುವ ಸಾಮರ್ಥ್ಯವನ್ನು ವೃದ್ಧಿಪಡಿಸಲಾಗುತ್ತಿದೆ. |
| ಇ) | ಶಾಲಾ-ಕಾಲೇಜುಗಳ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಮೊಬೈಲ್ ಬಳಸುತ್ತಿರುವುದರಿಂದ ಚಿಕ್ಕ ವಯಸ್ಸಿನಲ್ಲೇ ಮಾನಸಿಕ ಕ್ಷೋಭೆ ಮತ್ತು ಖಿನ್ನತೆಗೆ ಒಳಗಾಗುತ್ತಿರುವುದರಿಂದ ಇದಕ್ಕೆ ಕಡಿವಾಣ ಹಾಕಲು ಸರ್ಕಾರ ಚಿಂತನ ನಡೆಸಿದೆಯೇ; | ವಿದ್ಯಾರ್ಥಿಗಳಲ್ಲಿ ಮೊಬೈಲ್ ಬಳಕೆಯಿಂದ ಉಂಟಾಗುವ ಮಾನಸಿಕ ಕ್ಷೋಭೆ ಮತ್ತು ಖಿನ್ನತೆ ಮುಂತಾದ ಸಮಸ್ಯೆಗಳನ್ನು ಕಡಿಮೆ ಮಾಡುವ ಉದ್ದೇಶದಿಂದ ಶಾಲೆಗಳಲ್ಲಿ ವಿವಿಧ ಜಾಗೃತಿ ಕಾರ್ಯಕ್ರಮಗಳಾದ ಪಾತ್ರಾಭಿನಯ, ಜಾನಪದ ನೃತ್ಯ, ಪೋಸ್ಟರ್ ಬರವಣಿಗೆ ಸ್ಪರ್ಧೆ, ಚರ್ಚಾ ಕೂಟ, ಪ್ರಬಂಧ ಬರಹ, ಚಿತ್ರಕಲೆ ಹಾಗೂ ತಜ್ಞರಿಂದ ಉಪನ್ಯಾಸ (Expert Talk) ಮುಂತಾದ ಚಟುವಟಿಕೆಗಳ ಮೂಲಕ ಸಮೂಹ ಮಾಧ್ಯಮಗಳು ಮತ್ತು ಅಂತರ್ಜಾಲದ ಸುರಕ್ಷಿತ ಬಳಕೆಯ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುತ್ತಿದೆ. |
| ಈ) | ಮೊಬೈಲ್‌ನ ಅತಿಯಾದ ಬಳಕೆಯ ವಿರುದ್ಧ ಮಕ್ಕಳಲ್ಲಿ ಅಗತ್ಯ ಜಾಗೃತಿ ಮತ್ತು ಅರಿವು ಮೂಡಿಸಲು ಸರ್ಕಾರ ಈ ಕೂಡಲೇ ಸೂಕ್ತ ಕ್ರಮಗಳನ್ನು ಕೈಗೊಳುವುದೇ? | ವಿದ್ಯಾರ್ಥಿಗಳಲ್ಲಿ ಮೊಬೈಲ್ ಹಾಗೂ ಸಾಮಾಜಿಕ ಮಾಧ್ಯಮಗಳ ಅತಿಯಾದ ಬಳಕೆಯ ವಿರುದ್ಧ ಅಗತ್ಯ ಜಾಗೃತಿ ಮೂಡಿಸಲು ಸರ್ಕಾರಿ ಹಾಗೂ ಅನುದಾನಿತ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶಿಕ್ಷಕರಿಗೆ ತರಬೇತಿ ನೀಡಲಾಗುತ್ತಿದೆ. ತರಬೇತಿಯ 11 ಮಾಡ್ಯೂಲ್‌ಗಳಲ್ಲಿ "ಸಮೂಹ ಮಾಧ್ಯಮಗಳು ಹಾಗೂ ಅಂತರ್ಜಾಲದ ಸುರಕ್ಷಿತ ಬಳಕೆ" ಕುರಿತ ವಿಷಯವೂ ಒಳಗೊಂಡಿದೆ. ಇದಲ್ಲದೆ ಅಂತರ್ಜಾಲ, ಸಾಮಾಜಿಕ ಮಾಧ್ಯಮಗಳು ಮತ್ತು ಮೊಬೈಲ್‌ಗಳ ಸುರಕ್ಷಿತ ಬಳಕೆಯ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಪೋಸ್ಟರ್‌ಗಳನ್ನು ಸಿದ್ಧಪಡಿಸಿ ಶಾಲೆಗಳಿಗೆ ವಿತರಿಸಲಾಗುತ್ತಿದೆ. ವಿಷಯಕ್ಕೆ ಸಂಬಂಧಿಸಿದಂತೆ IEC (Information, Education and Communication) ವಿಡಿಯೋಗಳ ಮೂಲಕವೂ ವಿದ್ಯಾರ್ಥಿಗಳಿಗೆ ತಿಳುವಳಿಕೆ ನೀಡಲಾಗುತ್ತಿದೆ. |

ಸಂಖ್ಯೆ: ಇಪಿ 56 ಪಿಜಿಸಿ 2026

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು